ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ ಕುರಿತು

ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು) -

345 (363) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಪ್ರಸ್ತುತ ಪೊಲೀಸ್ ಇಲಾಖೆಯಲ್ಲಿ (ಪಿಸಿಯಿಂದ ಪಿಎಸ್ಐ ವರೆಗೆ) ಪೊಲೀಸ್ ಪೇದೆಯಿಂದ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹುದ್ದೆವರೆಗಿನ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಪೊಲೀಸ್ ಇಲಾಖೆಯಲ್ಲಿ ಪ್ರಸ್ತುತ 70:30 ಅನುಪಾತದಲ್ಲಿ ಪಿಎಸ್ಐ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುತ್ತಿದೆಯೇ; ಹಾಗಿದ್ದಲ್ಲಿ, ಪಿಎಸ್ಐ ದರ್ಜೆಯ ಹುದ್ದೆ 70:30 ರಿಂದ 50:50 ಅನುಪಾತಕ್ಕೆ ಪರಿಷ್ಕರಿಸಿ ಹುದ್ದೆಗಳನ್ನು ಭರ್ತಿ ಮಾಡಲು ಇರುವ ತೊಂದರೆಗಳೇನು;

(ಇ) ಬೆಂಗಳೂರು ನಗರದ ಎ.ಎಸ್.ಐ ದರ್ಜೆಯ ಅಧಿಕಾರಿಗಳ ಗ್ರೆಡೇಶನ್ ಪಟ್ಟಿಯನ್ನು ಸರ್ಕಾರ ತಯಾರಿಸಿದೆಯೇ;

(ಈ) ಬೆಂಗಳೂರು ನಗರದಲ್ಲಿ ಪ್ರಸ್ತುತ ರಾಜ್ಯದ ಉಳಿದ ಜಿಲ್ಲೆಗಳ ಮೂಲದ ಎಷ್ಟು ಪೊಲೀಸ್ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ? (ಸಂಪೂರ್ಣ ಮಾಹಿತಿ ನೀಡುವುದು)